ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರದ ಬಗ್ಗೆ ತನಿಖೆ ಕುರಿತು

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

286 (312) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮದಿಂದ 2015-16ನೇ ಸಾಲಿನಿಂದ 2019-20ನೇ ಸಾಲಿನವರೆಗೆ ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಮಂಜೂರು ಮಾಡಲಾಗಿದೆ ; ಸದರಿ ಅವಧಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವ್ಯವಸ್ಥಾಪಕ ನಿರ್ದೇಶಕರ ಹೆಸರು ಮತ್ತು ಹುದ್ದೆ ಬಿಡುಗಡೆ ಮಾಡಿದ ಅನುದಾನ ಶೀರ್ಷಿಕೆವಾರು, ಜಿಲ್ಲಾವಾರು, ತಾಲ್ಲೂಕುವಾರು, ಮಾಹಿತಿ ನೀಡುವುದು ;

(ಆ) ಸದರಿ ಕೆ.ಆರ್.ಐ.ಡಿ.ಎಲ್. ರವರು ಸಾವಿರಾರು ಕೋಟಿ ಮೊತ್ತದ ಕಾಮಗಾರಿ ನಡೆಸುವಷ್ಟು ತಜ್ಞ ಸಿಬ್ಬಂದಿ ನಿಗಮದ ಬಳಿ ಇಲ್ಲದಿರುವುದರಿಂದ, ಈಗಾಗಲೇ ನಿಗಮಕ್ಕೆ ಮಂಜೂರು ಮಾಡಿರುವ ಅನುದಾನದಲ್ಲಿ ಸರಿಯಾದ ಕಾಮಗಾರಿ ಮಾಡಿಸದೆ ದುರುಪಯೋಗ ಮಾಡಿರುವ ಕುರಿತು ತನಿಖೆ ಮಾಡಿ ಸಂಬಂಧಿಸಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದೇ ;

(ಇ) ಸದರಿ ಕೆ.ಆರ್.ಐ.ಡಿ.ಎಲ್. ರವರಲ್ಲಿ ಟೆಂಡರ್ ಕರೆದು ಗುತ್ತಿಗೆ ನೀಡಿದಾಗ ಕಾಮಗಾರಿ ಮುಗಿದ ಮೇಲೂ 2ವರ್ಷ ನಿರ್ವಹಣೆ ಮಾಡುವ ಹೊಣೆ ಗುತ್ತಿಗೆದಾರರ ಮೇಲೆ ಇದ್ದು ಸದರಿ ನಿಗಮಕ್ಕೆ ಇದು ಅನ್ವಯಿಸುತ್ತದೆಯೇ ? (ವಿವರ ನೀಡುವುದು)